*RNI No. KARBIL/2001/47147*

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-V<br>Part-V | ಬೆಂಗಳೂರು, ಬುಧವಾರ, ಫೆಬ್ರವರಿ ೧೫, ೨೦೧೭ (ಮಾಘ ೨೬, ಶಕ ವರ್ಷ ೧೯೩೮)<br>*Bengaluru, Wednesday, February 15, 2017 (Magha 26, Shaka Varsha 1938)* | ನಂ. ೧೭೫<br>*No. 175* |
|---|---|---|

## ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಕವಿಪ:ಆ-1:50:ಗಹುಭ:2017, ಬೆಂಗಳೂರು, ದಿನಾಂಕ: 15.02.2017.**

**ವಿಷಯ:** ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿನ ಗಣಕ ಕೇಂದ್ರದ ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡುವ ಬಗ್ಗೆ.

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ ಸಂ. | ಹುದ್ದೆಯ ಹೆಸರು | ವೇತನ ಶ್ರೇಣಿ | ಖಾಲಿ ಇರುವ ಹುದ್ದೆಗಳ ಸಂಖ್ಯೆ | ಹುದ್ದೆಗಳ ವರ್ಗೀಕರಣ | | ವಿದ್ಯಾರ್ಹತೆ |
|---|---|---|---|---|---|---|
| 01. | ಸಿಸ್ಟಂ ಮ್ಯಾನೇಜರ್ | 44250- 60600 | 01 | ಸಾಮಾನ್ಯ ಅರ್ಹತೆ (ಇತರೆ) | | ಕ್ರಮ ಸಂಖ್ಯೆ:1 ರಿಂದ 5 ರವರೆಗಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಕಂಪ್ಯೂಟರ್ ಸೈನ್ಸ್/ ಇನ್‌ಫರ್‌ಮೇಷನ್ ಸೈನ್ಸ್ /ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ವಿದ್ಯಾರ್ಹತೆಯಲ್ಲಿ ಇಂಜಿನಿಯರಿಂಗ್ ಪದವಿ ಹೊಂದಿರಬೇಕು ಮತ್ತು 03 ವರ್ಷಗಳ ಅನುಭವ ಹೊಂದಿರಬೇಕು. |
| 02. | ಸಿಸ್ಟಂ ಅನಾಲಿಸ್ಟ್ | 36300- 53850 | 01 | ಸಾಮಾನ್ಯ ಅರ್ಹತೆ (ಇತರೆ) | | |
| 03. | ಸೀನಿಯರ್ ಪ್ರೋಗ್ರಾಮರ್ | 28100- 50100 | 02 | ಪರಿಶಿಷ್ಟಜಾತಿ (ಇತರೆ) | 01 | |
| | | | | ಸಾಮಾನ್ಯ (ಇತರೆ) | 01 | |
| 04. | ಜೂನಿಯರ್ ಪ್ರೋಗ್ರಾಮರ್ | 22800- 43200 | 02 | ಪರಿಶಿಷ್ಟಜಾತಿ (ಇತರೆ) | 01 | |
| | | | | ಸಾಮಾನ್ಯ (ಇತರೆ) | 01 | |
| 05. | ಜೂನಿಯರ್ ಕನ್ಸೋಲ್ ಆಪರೇಟರ್ | 20000- 36300 | 04 | ಪರಿಶಿಷ್ಟಜಾತಿ (ಇತರೆ) | 01 | |
| | | | | ಸಾಮಾನ್ಯ (ಇತರೆ) | 01 | |
| | | | | ಪರಿಶಿಷ್ಟ ಪಂಗಡ (ಇತರೆ) | 01 | |
| | | | | ಸಾಮಾನ್ಯ (ಮಹಿಳೆ) | 01 | |
| 06. | ಕಂಪ್ಯೂಟರ್ ಆಪರೇಟರ್ | 16000- 29600 | 02 | ಪರಿಶಿಷ್ಟಜಾತಿ (ಇತರೆ) | 01 | 1.ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವಿಯನ್ನು ಹೊಂದಿರಬೇಕು. 2. ಗಣಕ ಕ್ಷೇತ್ರದಲ್ಲಿ 02 ವರ್ಷಗಳ ಅನುಭವ ಹೊಂದಿರಬೇಕು. |
| | | | | ಸಾಮಾನ್ಯ (ಇತರೆ) | 01 | |

01. ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ನಿಯಮಾವಳಿಗನುಸಾರ ಮೇಲ್ಕಂಡ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆ-1ರ ಅರ್ಜಿಗಳನ್ನು ಸರ್ಕಾರಿ ಪುಸ್ತಕ ಮಳಿಗೆಯಿಂದ ಪಡೆದು ದ್ವಿಪ್ರತಿಯಲ್ಲಿ ಸಲ್ಲಿಸುವ ಕೊನೆಯ ದಿನಾಂಕ 10.03.2017ರ ಸಂಜೆ: 04.00 ಗಂಟೆಗೆ ನಿಗದಿಗೊಳಿಸಲಾಗಿರುತ್ತದೆ.

02. ಕ್ರಮ ಸಂಖ್ಯೆ 01 ರಿಂದ 06 ರವರೆಗಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ 18 ವರ್ಷ ಪೂರೈಸಿರುವ ಅರ್ಹ ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಪ್ರತಿ ಹುದ್ದೆಗೆ **ಸಾಮಾನ್ಯ ಅಭ್ಯರ್ಥಿಗಳು ₹300/- ಗಳ ಡಿ.ಡಿ. ಅಥವಾ ಪೇ ಆರ್ಡರ್ ಅನ್ನು ಅಧಿಸೂಚನೆಯ ದಿನಾಂಕದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ, ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನಸೌಧ, ಬೆಂಗಳೂರು-560 001,** ಇವರ ಹೆಸರಿನಲ್ಲಿ ಖರೀದಿಸಿ ಅರ್ಜಿಯಲ್ಲಿ ವಿವರದೊಂದಿಗೆ ಲಗತ್ತಿಸತಕ್ಕದ್ದು. ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

03. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕವಿರುವುದಿಲ್ಲ.

04. **ಗರಿಷ್ಠ ವಯೋಮಿತಿ:**

| | | |
|---|---|---|
| ಪ.ಜಾ/ಪ.ಪಂ/ಪ್ರವರ್ಗ - I | : | 40 ವರ್ಷ ನಿಗದಿಪಡಿಸಲಾಗಿರುತ್ತದೆ. |
| ಪ್ರವರ್ಗ IIಎ, IIಬಿ, IIIಎ ಮತ್ತು IIIಬಿ | : | 38 ವರ್ಷ |
| ಸಾಮಾನ್ಯ ವರ್ಗ | : | 35 ವರ್ಷ |

05. ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ 1977ರ ನಿಯಮ 6(3)ರಲ್ಲಿ ತಿಳಿಸಲಾಗಿರುವ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ ರಿಯಾಯಿತಿ ನೀಡಲಾಗುವುದು.

06. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ವಿಧಾನ ಪರಿಷತ್ತಿನ ವೆಬ್ ಸೈಟ್ **www.kar.nic.in/klc** ನಲ್ಲಿ ಪಡೆಯಬಹುದಾಗಿರುತ್ತದೆ.

07. ಸರ್ಕಾರಿ ಇಲಾಖೆಗಳಲ್ಲಿ ಕೆಲಸ ಮಾಡುತ್ತಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದ ಮೂಲಕ ಅನುಬಂಧ-ಡಿ ಸರ್ಟಿಫಿಕೇಟ್‌ನೊಂದಿಗೆ ನಿಗಧಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಬೇಕು.

08. ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ 1977ರ ಪ್ರಕಾರ ರಾಜ್ಯ ಸಿವಿಲ್ ಸೇವೆಗಳಲ್ಲಿ ಹುದ್ದೆಗಳಿಗೆ ನೇಮಕಾತಿ ಹೊಂದಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳು **ಮೇಲ್ಕಂಡ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಗಳಲ್ಲಿ ಕನಿಷ್ಠ ಶೇ.50 ಅಂಕ ಪಡೆದಿರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.**

09. ಆಯ್ಕೆಯಾದ ಯಾವುದೇ ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರಕ್ಕೆ ಅವನು/ಅವಳು ನೇಮಿಸಿರುವ ಕೆಲಸಕ್ಕೆ ದೈಹಿಕವಾಗಿ ಹಾಗೂ ಮಾನಸಿಕವಾಗಿ ಯೋಗ್ಯವೆನಿಸಿದ ಹೊರತು ಅವನನ್ನು/ಅವಳನ್ನು ಆ ಹುದ್ದೆಗೆ ನೇಮಿಸಲಾಗುವುದಿಲ್ಲ.

10. ಅಭ್ಯರ್ಥಿಯು ತನ್ನ ಉಮೇದುವಾರಿಕೆ ಬಗ್ಗೆ ಅಧಿಕಾರಿಗಳು ಮತ್ತು ಅಧಿಕಾರೇತರರುಗಳಿಂದ ಯಾವುದೇ ಒತ್ತಡ ತಂದಲ್ಲಿ ಅಂತಹ ಅಭ್ಯರ್ಥಿಗಳು ಸದರಿ ಹುದ್ದೆಯ ನೇಮಕಾತಿಗೆ ಅನರ್ಹರಾಗಿರುತ್ತಾರೆ.

11. ಅಭ್ಯರ್ಥಿಗಳು ಅರ್ಜಿಯೊಂದಿಗೆ ಈ ಕೆಳಗೆ ತಿಳಿಸಲಾಗಿರುವ ದಾಖಲೆಗಳ ದ್ವಿಪ್ರತಿಗಳನ್ನು ಲಗತ್ತಿಸಬೇಕು.
    (ಅ) ಹುಟ್ಟಿದ ತಾರೀಖಿಗೆ ಆಧಾರದ ದಾಖಲೆ ಪ್ರತಿ.
    (ಆ) ಹುದ್ದೆಗೆ ಸೂಚಿಸಲಾಗಿರುವ ವಿದ್ಯಾರ್ಹತೆಗಳಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ನಕಲು ಪ್ರತಿ. (ಅಂಕಪಟ್ಟಿಗಳ ನಕಲು ಪ್ರತಿಗಳ ಸಮೇತ).
    (ಇ) ಸರ್ಕಾರದಿಂದ ನಿಗಧಿಪಡಿಸಿರುವ ನಮೂನೆಯಲ್ಲಿ ಜಾತಿ/ಪ್ರವರ್ಗ ದೃಢೀಕರಿಸುವ ಪ್ರಮಾಣ ಪತ್ರದ ನಕಲು ಪ್ರತಿಯನ್ನು ಸಲ್ಲಿಸತಕ್ಕದ್ದು.
    (ಈ) ಅರ್ಜಿ ನಮೂನೆಯಲ್ಲಿ ನಿಗದಿಪಡಿಸಿರುವಂತೆ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ ಇತ್ತೀಚಿನ (06 ತಿಂಗಳೊಳಗಿನ) ನಡತೆ ಪ್ರಮಾಣ ಪತ್ರ ಹಾಗೂ ಶಾಲಾ ನಡವಳಿಕೆಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

12. 2003ನೇ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ನೇಮಕಾತಿ ಮತ್ತು ಸೇವಾ ಷರತ್ತುಗಳು)ನಿಯಮಾವಳಿಗಳ ರೀತ್ಯಾ ಸದರಿ ಹುದ್ದೆಗಳ ಆಯ್ಕೆ ಪ್ರಕ್ರಿಯೆಯ ಕಾರ್ಯವಿಧಾನವನ್ನು ನಿಗಧಿಪಡಿಸುವ ಅಧಿಕಾರ ಸಕ್ಷಮ ಪ್ರಾಧಿಕಾರಕ್ಕೆ ಇರುತ್ತದೆ.

**ಸೂಚನೆ:** ಅಭ್ಯರ್ಥಿಗಳು ಮೂಲ ಪ್ರಮಾಣ ಪತ್ರಗಳನ್ನು ಲಗತ್ತಿಸತಕ್ಕದ್ದಲ್ಲ.

**ಮಾನ್ಯ ಸಭಾಪತಿಯವರ ಆದೇಶಾನುಸಾರ,**

**ಮೋಹನ್ ಕೆ.ಮುಗಳಿ**
ಅಧೀನ ಕಾರ್ಯದರ್ಶಿ(ಪ್ರ),
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಏ7) ಪ್ರತಿಗಳು: 250